# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 957 (962) |
| ಸದಸ್ಯರ ಹೆಸರು | ಡಾ: ಯತೀಂದ್ರ .ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 20.08.2025<br>(ಕಂದಾಯ ಇಲಾಖೆಯಿಂದ ವರ್ಗಾವಣೆಯಾಗಿರುತ್ತದೆ). |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎ ಸಮುದಾಯಗಳಿಗೆ ಸಿವಿಲ್ ಗುತ್ತಿಗೆ ಕಾಮಗಾರಿಗಳಲ್ಲಿ ರೂ.1.00 ಕೋಟಿಯವರೆಗೆ ಮೀಸಲಾತಿ ನೀಡಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿದ್ದು, ಸದರಿ ಪ್ರವರ್ಗಗಳಿಗೆ ಗುತ್ತಿಗೆಯಲ್ಲಿ ಮೀಸಲಾತಿಯನ್ನು ಪಡೆಯಲು ಆದಾಯದ ಮಿತಿ ಇರುವುದಿಲ್ಲದಿರುವುದು ನಿಜವೇ; | ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2(ಎ) ಸಮುದಾಯಗಳಿಗೆ ಸಿವಿಲ್ ಗುತ್ತಿಗೆ ಕಾಮಗಾರಿಗಳಲ್ಲಿ ರೂ.1.00 ಕೋಟಿಯವರೆಗೆ ಮೀಸಲಾತಿ ನಿಗಧಿಪಡಿಸಿ, ಸಂಖ್ಯೆ: ಸಂವ್ಯಶಾಇ 44 ಶಾಸನ 2023, ದಿನಾಂಕ:10-06-2024 ರಂದು ಅಧಿಸೂಚನೆ ಹೊರಡಿಸಲಾಗಿದೆ. |
| ಆ. | ಈ ಪ್ರವರ್ಗಗಳ ಜನರು ಕಂದಾಯ ಇಲಾಖೆಯ ತಹಶೀಲ್ದಾರ್ ಕಚೇರಿಗೆ ಭೇಟಿ ನೀಡಿ ಕೇವಲ ಜಾತಿಯನ್ನು ನಮೂದಿಸಿ ಪ್ರವರ್ಗ-1 ಮತ್ತು 2ಗೆ ಜಾತಿ ಪ್ರಮಾಣ ಪತ್ರವನ್ನು ಕೊಡುವಂತೆ ಮನವಿ ಮಾಡಿದಾಗ ತಹಶೀಲ್ದಾರ್ ಕಛೇರಿಗಳಲ್ಲಿ ಆದಾಯವನ್ನು ನಮೂದಿಸದೆ ಕೇವಲ ಜಾತಿ ಪ್ರಮಾಣ ಪತ್ರವನ್ನು ಸದರಿ ವರ್ಗಗಳಿಗೆ ಕೊಡಲು ಸಾಧ್ಯವಿಲ್ಲವೆಂದು ತಿಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30-03-2002ರ ಅನುಬಂಧ-I ರಲ್ಲಿನ ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2(ಎ) ಜಾತಿಯ ಸಿವಿಲ್ ಗುತ್ತಿಗೆದಾರರಿಗೆ / ಉದ್ಯಮಿಗಳಿಗೆ ವಿನಾಯಿತಿ ಪಡೆಯಲು 'ನಮೂನೆ-ಐ' ರಲ್ಲಿ ಪ್ರಪತ್ರವನ್ನು ನಿಗದಿಪಡಿಸಿ ಸರ್ಕಾರದ ಪತ್ರ ಸಂಖ್ಯೆ: ಹಿಂವಕ 207 ಬಿಸಿಎ 2025 ದಿನಾಂಕ: 29-07-2025 ಪತ್ರದಲ್ಲಿ 'ನಮೂನೆ-ಐ' ರಂತೆ ಜಾತಿ ಪ್ರಮಾಣ ಪತ್ರಗಳನ್ನು ವಿತರಿಸಲು ಸಂಬಂಧಪಟ್ಟವರಿಗೆ ಅಗತ್ಯ ಸೂಚನೆ / ನಿರ್ದೇಶನಗಳನ್ನು ನೀಡುವಂತೆ ಕಂದಾಯ ಇಲಾಖೆಗೆ ತಿಳಿಸಲಾಗಿದೆ.<br><br>ಅದರಂತೆ ಜಾತಿ ಪ್ರಮಾಣ ಪತ್ರಗಳನ್ನು ವಿತರಿಸಲು ಕಂದಾಯ ಇಲಾಖೆಯು ಕ್ರಮ ವಹಿಸಲಿದೆ. |
| ಇ. | ಬಂದಿದ್ದಲ್ಲಿ, ಸದರಿ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು) | |

ಹಿಂವಕ 308 ಬಿಸಿಎ 2025

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು